**ಅತೀ ಜರೂರು**

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

**"ಕನ್ನಡ ಕಾಯಕ ವರ್ಷ ೨೦೨೦-೨೧"**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.
ದಿನಾಂಕ: 05.01.2021.

ಸಂಖ್ಯೆ: ಕಾಶಿಇ/ಶೈವಿ/153/ಸ್ವಾ.ವಿ.ಜ./2020-21

**ಇವರಿಗೆ:**
ಜಂಟಿ ನಿರ್ದೇಶಕರು,
ಕಾಲೇಜು ಶಿಕ್ಷಣ ಇಲಾಖೆ,
ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು,
ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.

ಮಾನ್ಯರೆ,

ವಿಷಯ: ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವ ಕುರಿತು.

* * * * * *

ಸ್ವಾಮಿ ವಿವೇಕಾನಂದ ಜನ್ಮದಿನೋತ್ಸವ ಆಚರಣೆ ಸಂಬಂಧ ದಿನಾಂಕ:12.01.2021 ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್, ಇಲ್ಲಿ **"ರಾಷ್ಟ್ರೀಯ ಯುವ ದಿನಾಚರಣೆ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಈ ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಉಪ ಮುಖ್ಯಮಂತ್ರಿಗಳು, ಮಾನ್ಯ ಸಚಿವರುಗಳು ಪಾಲ್ಗೊಳ್ಳಲಿದ್ದಾರೆ. ಸದರಿ ಕಾರ್ಯಕ್ರಮದಲ್ಲಿ 2019-20ನೇ ಶೈಕ್ಷಣಿಕ ಸಾಲಿನಲ್ಲಿ ಶೈಕ್ಷಣಿಕ ಹಾಗೂ ಪಠ್ಯೇತರ ಕ್ಷೇತ್ರದಲ್ಲಿ ವಿಶೇಷ ಸಾಧನೆಗೈದ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನ್ಯ ಮುಖ್ಯಮಂತ್ರಿಗಳಿಂದ ಪುರಸ್ಕರಿಸಲು ತೀರ್ಮಾನಿಸಲಾಗಿದೆ.

ಈ ಸಂಬಂಧ ತಮ್ಮ ಕಛೇರಿ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ವಿಶ್ವವಿದ್ಯಾಲಯ ಮಟ್ಟದಲ್ಲಿ **ಪ್ರಥಮ ರ್‍ಯಾಂಕ್** ಪಡೆದ ವಿದ್ಯಾರ್ಥಿಗಳು ಹಾಗೂ ಕ್ರೀಡೆ, ಸಾಂಸ್ಕೃತಿಕ, ಎನ್.ಸಿ.ಸಿ. ಎನ್.ಎಸ್.ಎಸ್. ಮತ್ತು ರೇಂಜರ್ / ರೋವರ್ ಚಟುವಟಿಕೆಗಳಲ್ಲಿ ರಾಷ್ಟ್ರೀಯ / ಅಂತರಾಷ್ಟ್ರೀಯ ಮಟ್ಟದಲ್ಲಿ ವಿಶೇಷ ಸಾಧನೆ ಮಾಡಿದ ವಿದ್ಯಾರ್ಥಿಗಳ ವಿವರಗಳನ್ನು ಈ ಕೆಳಕಂಡ ನಮೂನೆಯಲ್ಲಿ ಭರ್ತಿ ಮಾಡಿ ದಿನಾಂಕ:08.01.2021 ಬೆಳಗ್ಗೆ:11.00 ಗಂಟೆಯೊಳಗೆ ಜಂಟಿ ನಿರ್ದೇಶಕರು, ಶೈಕ್ಷಣಿಕ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು, ರವರಿಗೆ ತುರ್ತಾಗಿ dce.academic@gmail.com ಈ-ಮೇಲ್ ವಿಳಾಸಕ್ಕೆ ಸಲ್ಲಿಸಲು ಸೂಚಿಸಲಾಗಿದೆ. ವಿಶ್ವವಿದ್ಯಾಲಯ ಪ್ರಕಟಿಸಿರುವ ರ್‍ಯಾಂಕ್ ಪ್ರತಿಯನ್ನು Scan ಮಾಡಿ ಕಳುಹಿಸುವುದು.

ನಮೂನೆ - 1

| ಕ್ರ.ಸಂ. | ವಿದ್ಯಾರ್ಥಿಗಳ ಹೆಸರು | ಕಾಲೇಜಿನ ಹೆಸರು | ರ್‍ಯಾಂಕ್ ಪಡೆದ ವಿಶ್ವವಿದ್ಯಾಲಯದ ಹೆಸರು (ಪ್ರಮಾಣ ಪತ್ರ ಲಗತ್ತಿಸುವುದು) | ವಿದ್ಯಾರ್ಥಿಯ ದೂರವಾಣಿ ಸಂಖ್ಯೆ |
|---|---|---|---|---|
| | | | | |

..2

Scanned with CamScanner

ನಮೂನೆ - 2

| ಕ್ರ.ಸಂ. | ವಿದ್ಯಾರ್ಥಿಗಳ ಹೆಸರು | ಕಾಲೇಜಿನ ಹೆಸರು | ಕ್ರೀಡೆ / ಸಾಂಸ್ಕೃತಿಕ / ಎನ್.ಸಿ.ಸಿ. ಎನ್.ಎಸ್.ಎಸ್. ಮತ್ತು ರೇಂಜರ್ / ರೋವರ್ ಚಟುವಟಿಕೆಗಳಲ್ಲಿ ಮಾಡಿದ ವಿಶೇಷ ಸಾದನೆ (ಪ್ರಮಾಣ ಪತ್ರ ಲಗತ್ತಿಸುವುದು) | ವಿದ್ಯಾರ್ಥಿಯ ದೂರವಾಣಿ ಸಂಖ್ಯೆ |
|---|---|---|---|---|
| | | | | |

ತಮ್ಮ ವಿಶ್ವಾಸಿ

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
2. ಕಛೇರಿ ಪ್ರತಿ.

Scanned with CamScanner